**ಕರ್ನಾಟಕ ಸರ್ಕಾರ**
**ಸಮಾಜ ಕಲ್ಯಾಣ ಇಲಾಖೆ**
# ಪರೀಕ್ಷಾ ಪೂರ್ವ ತರಬೇತಿ ಕೇಂದ್ರ

ಸಂಖ್ಯೆ : ಸಕಇ/ಪಪೂತಕೇ/ಎಸ್-1/ ಸಿಆರ್-04/2023-24

ಅಪರ ನಿರ್ದೇಶಕರ ಕಛೇರಿ
ಪರೀಕ್ಷಾ ಪೂರ್ವ ತರಬೇತಿ ಕೇಂದ್ರ,
ಡಾ|| ಬಿ.ಆರ್.ಅಂಬೇಡ್ಕರ್ ಭವನ
ವಸಂತನಗರ, ಬೆಂಗಳೂರು.
ದಿನಾಂಕ : 12-07-2024

## ಅಧಿಸೂಚನೆ

ವಿಷಯ: 2024-25ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಮೂಲಕ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ ಅಭ್ಯರ್ಥಿಗಳಿಗೆ ಊಟ-ವಸತಿಯೊಂದಿಗೆ, ಯು.ಪಿ.ಎಸ್.ಸಿ ಸಂಯೋಜಿತ ಪದವಿ (Integrated Under Graduate Degree) ತರಬೇತಿ ನೀಡುವ ಬಗ್ಗೆ.

*******

2024-25ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಮೂಲಕ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ ಅಭ್ಯರ್ಥಿಗಳಿಗೆ ಊಟ-ವಸತಿಯೊಂದಿಗೆ, ಯು.ಪಿ.ಎಸ್.ಸಿ ಸಂಯೋಜಿತ ಪದವಿ (Integrated Under Graduate Degree) ತರಬೇತಿ ನೀಡಲು ಉದ್ದೇಶಿಸಲಾಗಿದೆ.

ಯು.ಪಿ.ಎಸ್.ಸಿ ಸಂಯೋಜಿತ ಪದವಿ (Integrated Under Graduate Degree) ತರಬೇತಿಯ ಅವಧಿ, ಶೈಕ್ಷಣಿಕ ವಿದ್ಯಾರ್ಹತೆ, ಅರ್ಜಿಸಲ್ಲಿಸಬೇಕಾದ ವೆಬ್ ಸೈಟ್ ವಿಳಾಸ ಮತ್ತು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದ ವಿವರಗಳು ಈ ಕೆಳಕಂಡಂತಿದೆ.

| **ಕ್ರ ಸಂ** | **ವಿವರ** | |
|---|---|---|
| **01** | **ಯು.ಪಿ.ಎಸ್.ಸಿ ಸಂಯೋಜಿತ ಪದವಿ (Integrated Under Graduate Degree)** | ದ್ವಿತೀಯ ಪಿ.ಯು.ಸಿ ಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ಬಿ.ಎ, ಬಿ.ಕಾಂ, ಬಿ.ಎಸ್ಸಿ ಪದವಿ ಅಧ್ಯಯನದೊಂದಿಗೆ ಯು.ಪಿ.ಎಸ್.ಸಿ ಸಂಯೋಜಿತ ಪದವಿ (Integrated Under Graduate Degree) ಕಾರ್ಯಕ್ರಮದ ಉದ್ದೇಶವಾಗಿದೆ. ಸಂಯೋಜಿತ ಪದವಿಯು ವಸತಿಯುತ ಕಾರ್ಯಕ್ರಮವಾಗಿರುವುದರಿಂದ ಊಟ/ವಸತಿಯೊಂದಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡಲಾಗುವುದು. |
| 02 | **ವಯಸ್ಸು** | ಕನಿಷ್ಠ 17 ವರ್ಷ |
| 03 | **ಕೋರ್ಸ್ ಗಳ ವಿವರ** | ಬಿ.ಎ, ಬಿ.ಕಾಂ, ಬಿ.ಎಸ್ಸಿ ಪದವಿ |

| | | |
|---|---|---|
| 04 | **ಅಭ್ಯರ್ಥಿಯ ಸಾಮಾನ್ಯ ಅರ್ಹತೆ** | 1. ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು;<br>2. ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ನಿಗಧಿತ ನಮೂನೆಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದಿರಬೇಕು.<br>3. ದೈಹಿಕ ಅಂಗವಿಕಲ ಮೀಸಲಾತಿಯಡಿ ಅರ್ಜಿ ಸಲ್ಲಿಸುವ ಅಭ್ಯರ್ಥಿ, ನಿಗಧಿತ ಪ್ರಾಧಿಕಾರದಿಂದ ನಿಗಧಿಪಡಿಸಲಾದ ಕೊನೆಯ ದಿನಾಂಕದೊಳಗೆ ಅಂಗವಿಕಲ ಪ್ರಮಾಣ ಪತ್ರ ಪಡೆದಿರಬೇಕು.<br>4. ದ್ವಿತೀಯ ಪಿ.ಯು.ಸಿ ಯಲ್ಲಿ ಉತ್ತೀರ್ಣರಾಗಿರಬೇಕು. |
| 05 | **ವಾರ್ಷಿಕ ಆದಾಯ** | ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ ರೂ.**5.00** ಲಕ್ಷ ಮೀರಿರಬಾರದು. |
| 06 | **ಆಯ್ಕೆ ವಿಧಾನ** | • ದ್ವಿತೀಯ ಪಿ.ಯು.ಸಿ ಯಲ್ಲಿ ಪಡೆದಿರುವ ಅಂಕಗಳ ಆಧಾರದ ಆಯ್ಕೆ ಮಾಡಲಾಗುವುದು. |
| 07 | **ಅರ್ಜಿ ಸಲ್ಲಿಸುವ ವೆಬ್ ಸೈಟ್ ವಿಳಾಸ** | **www.petc.kar.nic.in** |
| 08 | **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ** | **31.07.2024** |

**ಗಮನದಲ್ಲಿಡಬೇಕಾದ ಅಂಶ :-**

- ಇಲಾಖಾ ವೆಬ್ ಸೈಟ್ ನಲ್ಲಿ ಕಾಲಕಾಲಕ್ಕೆ ನೀಡಲಾಗುವ ಮಾಹಿತಿಯು ಅಧಿಕೃತ ಹಾಗೂ ಅಂತಿಮವಾಗಿರುತ್ತದೆ.
- ಇಲಾಖಾವತಿಯಿಂದ ಯಾವುದೇ ಪತ್ರ ವ್ಯವಹಾರವನ್ನು ನಡೆಸಲಾಗುವುದಿಲ್ಲವಾದ್ದರಿಂದ, ಇಲಾಖಾ ವೆಬ್ ಸೈಟ್ ನ್ನು ಕಾಲಕಾಲಕ್ಕೆ ವೀಕ್ಷಿಸತಕ್ಕದ್ದು.
- ತಪ್ಪು ಮಾಹಿತಿಯ ಕಾರಣದಿಂದ ಉಂಟಾಗಬಹುದಾದ ಲೋಪಗಳಿಗೆ ಸಂಬಂಧಪಟ್ಟ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ.
- ಅಭ್ಯರ್ಥಿಗಳು ಈಗಾಗಲೇ ಪದವಿ ವ್ಯಾಸಂಗವನ್ನು ಪೂರ್ಣಗೊಳಿಸಿದ್ದಲ್ಲಿ, ಮತ್ತೊಮ್ಮೆ ಪದವಿ ಅಧ್ಯಯನಕ್ಕೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

**ಸಹಿ/-**
ಅಪರ ನಿರ್ದೇಶಕರು (ಪ್ರಭಾರ),
ಪರೀಕ್ಷಾ ಪೂರ್ವ ತರಬೇತಿ ಕೇಂದ್ರ,
ಬೆಂಗಳೂರು.